## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 776/2024

**ಸಾಕ್ಷಿಯನ್ನು ದಿಃ 13.01.2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ಜಯರಾಮ್ | ಸಿಡಬ್ಲ್ಯೂಃ 4 | ಪಿಡಬ್ಲ್ಯೂಃ 3 |
| ತಂದೆಯ ಹೆಸರು | ಹೊಸೂರಯ್ಯ | | |
| ವಯಸ್ಸು | 55 ವರ್ಷ | | |
| ಕೆಲಸ | ಕೂಲಿ ಕೆಲಸ | | |
| ವಾಸಸ್ಥಳ | ರಂಗನಾಥಬಡಾವಣೆ,<br>ಹುಣಸೂರು | | |

### ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಚಾಸಾ–1 ರಿಂದ 5 ಗೊತ್ತು. ಆರೋಪಿತರು ಗೊತ್ತು. ಅವರೆಲ್ಲರೂ ನನ್ನ ಊರಿನವರು. ನಾನು ಯಾವುದೇ ಗಲಾಟೆಯನ್ನು ನೋಡಿಲ್ಲ. ಆರೋಪಿತರು ಚಾಸಾ–1 ಮತ್ತು 2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ಅಡ್ಡಗಟ್ಟಿ ತಡೆದಿಲ್ಲ. ಕೈಗಳಿಂದ ಹೊಡೆದಿಲ್ಲ ಮತ್ತ ಪ್ರಾಣ ಬೆದರಿಕೆ ಹಾಕಿಲ್ಲ. ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

### ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ದಿಃ 02.12.2023 ರಂದು ಬೆಳಿಗ್ಗೆ 7.45 ಗಂಟೆ ಸಮಯದಲ್ಲಿ ಚಾಸಾ–2 ರವರ ಮನೆಯ ಹತ್ತಿರ ಆರೋಪಿತರು ಗುಂಪುಕಟ್ಟಿಕೊಂಡು ಬಂದು ಚಾಸಾ–1ರವರನ್ನು ಉದ್ದೇಶಿಸಿ ಬೋಳಿ ಮಗನೇ, ಸೂಳೆಮಗನೇ ನಮ್ಮ ಮನೆಯ ಹತ್ತಿರ ಬಂದು ನನ್ನ ತಾಯಿಯ ಜೊತೆಯಲ್ಲಿ ಗಲಾಟೆ ಮಾಡಿದ್ದಿರಾ ತಾಕತ್ತು ಇದ್ದರೆ ನನ್ನ ಜೊತೆ ಜಗಳಕ್ಕೆ ಬಾ ಎಂದು 1ನೇ ಆರೋಪಿ ಚಾಸಾ–1 ರವರ ಕುತ್ತಿಗೆ ಪಟ್ಟಿ ಹಿಡಿದು ಮುಂದೆ ಹೋಗದಂತೆ ತಡೆದು ನಿಲ್ಲಿಸಿದಾಗ ಚಾಸಾ–1ರವರನ್ನು ಬಿಡಿಸಲು ಬಂದ ಚಾಸಾ–2ರವರನ್ನು 2ನೇ

ಆರೋಪಿ ತಳ್ಳಿ ಕೆಳಕ್ಕೆ ಬೀಳಿಸಿದ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ-3 ರವರು ಜಗಳ ಬಿಡಿಸಿ ಚಾಸಾ-2 ರವರನ್ನು ಎತ್ತಿ ಸುಧಾರಿಸಿ ನೋಡಿದಾಗ, ಚಾಸಾ-2 ರವರ ಬಲಗೈಗೆ ಸಣ್ಣ-ಪುಟ್ಟಗಾಯವಾಗಿತ್ತು ಎಂದರೆ ಸರಿಯಲ್ಲ. ನಂತರ ಆರೋಪಿತರು ಚಾಸಾ-1 ರವರನ್ನು ಉದ್ದೇಶಿಸಿ ಇನ್ನೊಮ್ಮೆ ನಮ್ಮ ತಂಟೆ ತಕರಾರಿಗೆ ಬಂದರೆ ಮುಗಿಸದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿ ಹೊರಟು ಹೋದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಈಗ ಓದಿ ಹೇಳಿದಂತೆ ದಿಃ 07.12.0223 ರಂದು ವಿವರವಾದ ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ, ಸಾಕ್ಷಿ ಅಲ್ಲಗಳೆದ ಹೇಳಿಕೆಯನಲ್ಲು ನಿಪಿ-3 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿತರ ಪರ ಶ್ರೀ. SK ಪರ ಕು. IHS ವಕೀಲರಿಂದಃ**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.